# Akashvani : Bangalore
## Regional Bulletin In Kannada
## 12.01.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕಲಬುರಗಿಯ ಯಡ್ರಾಮಿಯಲ್ಲಿಂದು ೯೦೬ ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ
- ಮೀಸಲಾತಿಯಲ್ಲಿ ಕೆನೆಪದರ ವಿಚಾರ; ಕೇಂದ್ರ ಹಾಗೂ ರಾಜ್ಯಸರ್ಕಾರಕ್ಕೆ ಸುಪ್ರೀಂಕೋರ್ಟ್ ನೋಟಿಸ್
- ಕೋಗಿಲು ಪ್ರಕರಣ; ಬಿಜೆಪಿ ಸತ್ಯಶೋಧನಾ ತಂಡದಿಂದ ವರದಿ ಸಲ್ಲಿಕೆ - ಎನ್‌ಐಎ ತನಿಖೆಗೆ ಆಗ್ರಹ
- ಗಣರಾಜ್ಯೋತ್ಸವದ ಅಂಗವಾಗಿ ಲಾಲ್‌ಬಾಗ್‌ನಲ್ಲಿ ಈ ಬಾರಿ 'ತೇಜಸ್ವಿ ವಿಸ್ಮಯ' ಪುಷ್ಪ ಪ್ರದರ್ಶನ
- ಮೂಡಬಿದಿರೆಯಲ್ಲಿ ೮೫ನೇ ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಅಥ್ಲೆಟಿಕ್ ಚಾಂಪಿಯನ್‌ಶಿಪ್‌ಗೆ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಚಾಲನೆ

*****************

ಹತ್ತು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಅಸಮಾನತೆ ಹೋಗಿ ಸಮಾನತೆ ಬರಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಕಲಬುರಗಿ ಜಿಲ್ಲೆಯ ಯಡ್ರಾಮಿಯಲ್ಲಿಂದು ಆಯೋಜಿಸಲಾಗಿದ್ದ ಪ್ರಜಾಸೌಧ. ಕೆಪಿಎಸ್ ಶಾಲೆ ಹಾಗೂ ವಿವಿಧ ಇಲಾಖೆಗಳ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮತ್ತು ಫಲಾನುಭವಿಗಳಿಗೆ ಸೌಲಭ್ಯಗಳ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ವಿವಿಧ ಇಲಾಖೆಗಳ ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಣೆ ಮಾಡಿದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿ, ಇಂದು ೯೦೬ ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಾಗಿದೆ ಎಂದು ತಿಳಿಸಿದರು.

ಶಾಸಕ ಅಜಯ್ ಸಿಂಗ್ ಅವರಿಗೆ ಅನುದಾನವನ್ನು ಪೂರ್ಣವಾಗಿ ವೆಚ್ಚ ಮಾಡಬೇಕು, ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ತಿಳಿಸಲಾಗಿತ್ತು. ಅದರಂತೆ ೩೦೦ ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಅಡಿಗಲ್ಲು ಹಾಕಲಾಗಿದೆ. ರಾಜ್ಯದಲ್ಲಿ ಒಟ್ಟು ೯೦೦ ಕೆಪಿಎಸ್ ಶಾಲೆ ಮಂಜೂರಾಗಿದೆ ಎಂದು ಸ್ಪಷ್ಟಪಡಿಸಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

****************

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಅಗತ್ಯವಿದ್ದರೆ ಹೈಕಮಾಂಡ್ ದೆಹಲಿಗೆ ಕರೆಯಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಚರ್ಚೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ಉಭಯ ನಾಯಕರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಮೈಸೂರಿನಲ್ಲಿ ಭೇಟಿಯಾಗಲಿದ್ದಾರೆ ಎಂದು ತಿಳಿಸಿದ್ದಾರೆ.

ಇದೇ ವೇಳೆ, ಮನ್ರೇಗಾ ರದ್ದತಿ ಕುರಿತಂತೆ ಕೇಂದ್ರ ಸರ್ಕಾರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಸರ್ಕಾರವು ಈ ಯೋಜನೆಯನ್ನು ದುರ್ಬಲಗೊಳಿಸುತ್ತಿದೆ ಎಂದು ತಿಳಿಸಿದ್ದಾರೆ.

****************

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿಯಲ್ಲಿ ಕೆನೆಪದರ ತತ್ವವನ್ನು ಜಾರಿಗೆ ತರುವಂತೆ ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಕುರಿತು ಸುಪ್ರೀಂಕೋರ್ಟ್ ಇಂದು ಕೇಂದ್ರ ಸರ್ಕಾರ ಮತ್ತು ಎಲ್ಲ ರಾಜ್ಯ ಸರ್ಕಾರಗಳಿಗೆ ನೋಟಿಸ್ ನೀಡಿದೆ.

ಮುಖ್ಯನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ಜೋಯ್ ಮಲ್ಯ ಬಾಗ್ಚಿ ಪೀಠವು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಪ್ರತಿಕ್ರಿಯೆಗಳನ್ನು ಕೋರಿದೆ.

ವಕೀಲರಾದ ಅಶ್ವಿನಿ ಕುಮಾರ್ ಉಪಾಧ್ಯಾಯ ಅವರು ಈಗಾಗಲೇ ಸಾಂವಿಧಾನಿಕ ಅಥವಾ ಹಿರಿಯ ಸರ್ಕಾರಿ ಹುದ್ದೆಯನ್ನು ಪಡೆದಿರುವ ಪ್ರಕರಣಗಳಲ್ಲಿ ಅಂತಹ ವ್ಯಕ್ತಿಯ ಮಕ್ಕಳು ಮೀಸಲಾತಿಯ ಸೌಲಭ್ಯಗಳನ್ನು ಪಡೆಯಲು ಅನುಮತಿ ನೀಡಬಾರದು ಎಂದು ವಾದಿಸಿದರು.

ಅರ್ಜಿಯಲ್ಲಿ ಕೆನೆಪದರವನ್ನು ಹೊರಗಿಡದಿರುವುದು ಗಂಭೀರ ರಾಷ್ಟ್ರೀಯ, ಸಾಮಾಜಿಕ ಮತ್ತು ಆರ್ಥಿಕ ಪರಿಣಾಮಗಳನ್ನು ಬೀರುತ್ತದೆ ಎಂದು ಉಲ್ಲೇಖಿಸಲಾಗಿದೆ.

****************

ಬೆಂಗಳೂರಿನ ಕೋಗಿಲು ಬಡಾವಣೆ ಅಕ್ರಮವಾಸಿಗಳ ತೆರವು ಕುರಿತಂತೆ ಬಿಜೆಪಿ ಸತ್ಯಶೋಧನಾ ತಂಡವು ಪಕ್ಷದ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರಿಗೆ ಇಂದು ವರದಿ ಸಲ್ಲಿಸಿದೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಯಲಹಂಕ ಶಾಸಕ ಎಸ್.ಆರ್.ವಿಶ್ವನಾಥ್ ತನಿಖೆಯನ್ನು ಎನ್‌ಐಎಗೆ ವಹಿಸುವಂತೆ ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿ ಸರ್ಕಾರಿ ಜಾಗದಲ್ಲಿ ಹೊಸದಾಗಿ ಗುಡಿಸಲು ಹಾಕಿಕೊಂಡವರನ್ನು ಕೂಡಲೇ ಸರ್ಕಾರ ತೆರವುಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

ನಗರದಲ್ಲಿರುವ ೧೦೦ ಮಂದಿ ಚಿಂದಿ ಆಯುವವರ ಪೈಕಿ ಶೇಕಡಾ ೯೫ ಜನರು ರೋಹಿಂಗ್ಯಾಗಳೇ ಇದ್ದಾರೆ. ಸರ್ಕಾರ ತರಾತುರಿಯಲ್ಲಿ ಇವರಿಗೆ ಮನೆ ಕೊಡಲು ಹೊರಟಿದೆ. ವಿದೇಶದವರು ಇರುವ ಕಾರಣ ಎನ್‌ಐಎ ತನಿಖೆಗೆ ಅವರು ಆಗ್ರಹಿಸಿದ್ದಾರೆ.

*****************

ಬೆಂಗಳೂರಿನ ಲಾಲ್‌ಬಾಗ್‌ನಲ್ಲಿರುವ ಐತಿಹಾಸಿಕ ಗಾಜಿನಮನೆ, ಈ ಬಾರಿಯ ಗಣರಾಜ್ಯೋತ್ಸವದಲ್ಲಿ ಕನ್ನಡದ ಸಾಹಿತಿ, ಪ್ರಕೃತಿ ತಜ್ಞ ದಿವಂಗತ ಕೆ.ಪಿ.ಪೂರ್ಣಚಂದ್ರ ತೇಜಸ್ವಿ ಅವರಿಗೆ ಪುಷ್ಪನಮನ ಸಲ್ಲಿಸಲು ನಿರ್ಧರಿಸಿದೆ.

೨೧೯ನೇ ಆವೃತ್ತಿಯ ಲಾಲ್‌ಬಾಗ್ ಪುಷ್ಪ ಪ್ರದರ್ಶನವು ತೇಜಸ್ವಿ ವಿಸ್ಮಯ ಎಂಬ ವಿಷಯದೊಂದಿಗೆ ಇದೇ ೧೪ ರಿಂದ ೨೬ರವರೆಗೆ ನಡೆಯಲಿದೆ. ಪುಷ್ಪ ಪ್ರದರ್ಶನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಔಪಚಾರಿಕವಾಗಿ ಉದ್ಘಾಟಿಸಲಿದ್ದಾರೆ ಎಂದು ತೋಟಗಾರಿಕಾ ಹೆಚ್ಚುವರಿ ನಿರ್ದೇಶಕ ಎಂ.ಜಗದೀಶ್ ತಿಳಿಸಿದ್ದಾರೆ.

ಹೂವಿನ ಪರ್ವತ, ಜಲಪಾತ ಮತ್ತು ಅವರ ಮನೆ ನಿರುತ್ತರದ ಪ್ರತಿಕೃತಿ ಸೇರಿದೆ. ಐದು ಲಕ್ಷಕ್ಕೂ ಹೆಚ್ಚು ಹೂವುಗಳು ಮತ್ತು ೨ ಲಕ್ಷದ ೪೦ ಸಾವಿರ ಗಿಡಗಳನ್ನು ಬಳಸಿ ತೇಜಸ್ವಿ ಅವರ ಕರ್ವಾಲೋದ ಪಾತ್ರಗಳನ್ನು ಗುರುತಿಸಲು ನಿರ್ಧರಿಸಲಾಗಿದೆ. ಇದೇ ಮೊದಲ ಬಾರಿಗೆ ೨ ಹೂವಿನ ಸ್ತಬ್ಧಚಿತ್ರಗಳು ಗಾಜಿನಮನೆಯ ಸುತ್ತಲೂ ಸಂಚರಿಸಲಿವೆ.

*****************

ರಾಜ್ಯದ  ಎನ್‌ಎಚ್-೨೭೫ ಹೆದ್ದಾರಿ ಸುರಕ್ಷತೆಗಾಗಿ ಕೇಂದ್ರ ಸರ್ಕಾರದಿಂದ ೯೪ ಕೋಟಿ ೮ ಲಕ್ಷ ರೂಪಾಯಿಗಳ ಬೃಹತ್ ಯೋಜನೆಗೆ ತಾಂತ್ರಿಕ ಅನುಮೋದನೆ ನೀಡಿ ಹಣ ಬಿಡುಗಡೆ ಮಾಡಲಾಗಿದೆ ಎಂದು ಮೈಸೂರು-ಕೊಡಗು ಲೋಕಸಭಾ ಸದಸ್ಯ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಬಂಟ್ವಾಳ-ಬೆಂಗಳೂರು ವಿಭಾಗದ ರಸ್ತೆಯ ಅಭಿವೃದ್ಧಿಗಾಗಿ ಸಂಪಾಜೆ ಯಿಂದ ಕುಶಾಲನಗರದವರೆಗೆ ಅನುದಾನ   ನೀಡಿದ್ದು,  ಈ ರಸ್ತೆ  ಸರ್ವತೋಮುಖ ಅಭಿವೃದ್ಧಿ ಕಾಣಲಿದೆ ಎಂದು ಹೇಳಿದ್ದಾರೆ.

ಈ ಹೆದ್ದಾರಿಯ ಆಯ್ದ ಭಾಗಗಳಲ್ಲಿ ರಕ್ಷಣಾತ್ಮಕ ಗೋಡೆಗಳ ನಿರ್ಮಾಣ ಮತ್ತು ಸುರಕ್ಷತಾ ಕಾಮಗಾರಿಗಳಿಗಾಗಿ ಆರ್ಥಿಕ ಮತ್ತು ತಾಂತ್ರಿಕ ಮಂಜೂರಾತಿಯನ್ನು ನೀಡಿ ಆದೇಶ ಹೊರಡಿಸಿದೆ.

ಮಳೆಗಾಲದಲ್ಲಿ ಭೂಕುಸಿತ ತಡೆ ಕಾಮಗಾರಿಗೂ ಇದು ಸಹಕಾರಿಯಾಗಲಿದೆ. ಮಳೆಗಾಲವನ್ನೂ ಒಳಗೊಂಡಂತೆ ೧೮ ತಿಂಗಳುಗಳಲ್ಲಿ ಈ ಯೋಜನೆಯು ಪೂರ್ಣಗೊಳ್ಳಲಿದೆ ಎಂದು ಮಾಹಿತಿ ನೀಡಿದ್ದಾರೆ.

****************

ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದಿರೆಯ ಸ್ವರಾಜ್ ಮೈದಾನದಲ್ಲಿ ಇದೇ ೧೬ರವರೆಗೆ ನಡೆಯುವ ೮೫ನೇ ಅಖಿಲ ಭಾರತ ಅಂತರ್‌ವಿಶ್ವವಿದ್ಯಾಲಯ ಮಟ್ಟದ ಅಥ್ಲೆಟಿಕ್ ಚಾಂಪಿಯನ್‌ಶಿಪ್‌ಗೆ ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಇಂದು ಚಾಲನೆ ನೀಡಿದರು.

ಬಳಿಕ ನಡೆದ ಆಕರ್ಷಕ ಪಥ ಸಂಚಲನದಲ್ಲಿ ಪಾಲ್ಗೊಂಡ ಅವರು ಗೌರವ ವಂದನೆ ಸ್ವೀಕರಿಸಿದರು. ಪಥ ಸಂಚಲನದಲ್ಲಿ ದೇಶದ ೩೧೨ಕ್ಕೂ ಅಧಿಕ ವಿಶ್ವವಿದ್ಯಾಲಯಗಳ ಸುಮಾರು ೪ ಸಾವಿರದ ೨೮೮ ಅಥ್ಲೀಟ್‌ಗಳು ಭಾಗವಹಿಸಿದ್ದರು. ರಾಜ್ಯದ ವಿವಿಧ ಕಲಾ ತಂಡಗಳು ಪಥಸಂಚಲನದಲ್ಲಿ ಪಾಲ್ಗೊಳ್ಳುವ ಮೂಲಕ ಕ್ರೀಡಾಕೂಟದ ಮೆರುಗು ಹೆಚ್ಚಿಸಿದವು.

****************

ಮಂಡ್ಯ ಜಿಲ್ಲೆಯ ವಿಶ್ವೇಶ್ವರಯ್ಯ ಮುಖ್ಯ ನಾಲೆಗೆ ಸೇರಿದ ಉಪನಾಲೆ ಮತ್ತು ಸೀಳು ನಾಲೆಗಳ ನಾಲಾ ಆಧುನೀಕರಣಕ್ಕೆ ಸರ್ಕಾರದಿಂದ ೪೦೦ ಕೋಟಿ ರೂಪಾಯಿ ಬಿಡುಗಡೆಯಾಗಿದೆ. ಶೀಘ್ರವೇ ಕಾಮಗಾರಿಗೆ ಚಾಲನೆ ನೀಡಿ ನೀರಿನ ಸಮಸ್ಯೆಯನ್ನು ಸಂಪೂರ್ಣವಾಗಿ ಬಗೆಹರಿಸಲಾಗುವುದು ಎಂದು ಮಳವಳ್ಳಿ ಶಾಸಕ ಪಿ.ಎಂ ನರೇಂದ್ರಸ್ವಾಮಿ ಭವರಸೆ ನೀಡಿದ್ದಾರೆ.

ಜಮೀನಿಗೆ ಹೋಗುವ ರಸ್ತೆಗಳನ್ನು ಸಂಪೂರ್ಣವಾಗಿ ಅಭಿವೃದ್ಧಿ ಪಡಿಸಲಾಗುವುದು. ಜೊತೆಗೆ ಎಸ್‌ಸಿಪಿ ಟಿಎಸ್‌ಪಿ ಅನುದಾನದಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ರಸ್ತೆಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

****************

ರಾಜ್ಯದ ಹನ್ನೊಂದು ಜಿಲ್ಲೆಗಳ ಅಂತಿಮ ಪಟ್ಟಿಯಲ್ಲಿರುವ ಅಗ್ನಿವೀರ್ ಅಭ್ಯರ್ಥಿಗಳಿಗೆ ಇದೇ ೩೦ ರಿಂದ ೧೦ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದರೆಯ ಸ್ವರಾಜ್ ಮೈದಾನದಲ್ಲಿ ಅಗ್ನಿವೀರ್ ನೇಮಕಾತಿ ರ್‍ಯಾಲಿ ಆಯೋಜಿಸಲಾಗಿದೆ.

೨೦೨೫ರ ಜೂನ್ ೩೦ ರಿಂದ ಜುಲೈ ೧೦ರವರೆಗೆ ನಡೆಸಲಾದ ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಅಗ್ನಿವೀರ್ ಅರ್ಜಿದಾರರನ್ನು ರ್‍ಯಾಲಿಗೆ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳನ್ನು ಕಾರ್ಯಕ್ಷಮತೆ, ನೇಮಕಾತಿ ರ್‍ಯಾಲಿಯಲ್ಲಿ ನಡೆಸುವ ಪರೀಕ್ಷೆಗಳು ಮತ್ತು ಅಂತಿಮ ಅರ್ಹತೆಯ ಮೇಲೆ ಆಯ್ಕೆ ಮಾಡಲು ನಿರ್ಧರಿಸಲಾಗಿದೆ.

*****************

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ೨೦೨೦ ಹಾಗೂ ೨೦೨೧ ನೇ ಕ್ಯಾಲೆಂಡರ್ ವರ್ಷಗಳ ರಾಜ್ಯ ಚಲನಚಿತ್ರ ವಾರ್ಷಿಕ ಸಾಹಿತ್ಯ ಪ್ರಶಸ್ತಿಗಳನ್ನು ಪ್ರಕಟಿಸಿದೆ.

೨೦೨೦ನೇ ಕ್ಯಾಲೆಂಡರ್ ವರ್ಷದ ಚಲನಚಿತ್ರ ಸಾಹಿತ್ಯ ಪ್ರಶಸ್ತಿಗೆ ಬಳ್ಳಾರಿ ಜಿಲ್ಲೆ ಸಿರಿಗೇರಿಯ ಅನ್ನಪೂರ್ಣ ಪ್ರಕಾಶನ ಪ್ರಕಟಿಸಿದ, ಹಿರಿಯ ಪತ್ರಕರ್ತ ರಘುನಾಥ ಚ.ಹ.ಅವರು ಆಯ್ದ ೨೦ ಸಿನಿಮಾಗಳ ಕುರಿತು  ಬರೆದ ಲೇಖನಗಳ ಸಂಗ್ರಹ "ನಮೋ ವೆಂಕಟೇಶ" ಕೃತಿ ಆಯ್ಕೆಯಾಗಿದೆ.

೨೦೨೧ ನೇ ಕ್ಯಾಲೆಂಡರ್ ವರ್ಷದ ಚಲನಚಿತ್ರ ವಾರ್ಷಿಕ ಸಾಹಿತ್ಯ ಪ್ರಶಸ್ತಿಗೆ ಬೆಂಗಳೂರಿನ ಸಿರಿಗಂಧ ಪ್ರಕಾಶನ ಪ್ರಕಟಿಸಿರುವ ,ಲೇಖಕ ಹಾಗೂ ಚಲನಚಿತ್ರ ನಿರ್ದೇಶಕ  ಪ್ರಕಾಶರಾಜ್ ಮೇಹು ಅವರು ಬರೆದ ಡಾ.ರಾಜಕುಮಾರ್ ಬದುಕಿನ ಕುರಿತ "ಅಂತರಂಗದ ಅಣ್ಣ" ಕೃತಿ ಆಯ್ಕೆಯಾಗಿದೆ.

********ಮುಕ್ತಾಯ********